# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಜಾಪುರ ಜಿಲ್ಲೆ, ಸಿಂಧಗಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ–1) ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: ೧) ಸರ್ಕಾರದ ಆದೇಶ ಸಂಖ್ಯೆ:ನಅಇ: 91: ಬೆಮಪ್ರಾ: 2006: ದಿನಾಂಕ:10.05.2006.

೨) ಸಿಂಧಗಿ ಪುರಸಭೆ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ: ಯೋಪ್ರಾ:ಪುಸಸಿ:ಓ.ಮಯೋಪ–1(ಅಂತಿಮ):07-08:702-703 ದಿ:17.12.2007.

3) ನಗರ ಯೋಜನಾ ನಿರ್ದೇಶಕರ ಕಾರ್ಯಾಲಯದ ಏಕ ಕಡತ ಸಂಖ್ಯೆ:ನಯೋ(5)ಉನಿ1:ಸಿಂ.ಮ.ಯೋ.(ಪ–1): ಅಂತಿಮ: 2008 ರಲ್ಲಿ ನೀಡಿರುವ ಅಭಿಪ್ರಾಯ ದಿ:31.01.2008

<u>ಪ್ರಸ್ತಾವನೆ:</u>

ಮೇಲೆ ಓದಲಾದ(1) ರ ಸರ್ಕಾರಿ ಆದೇಶದಲ್ಲಿ ವಿಜಾಪುರ ಜಿಲ್ಲೆ, ಸಿಂಧಗಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ (ಪರಿಷ್ಕೃತ – 1) ರ ತಾತ್ಕಾಲಿಕ ಅನುಮೋದನೆ ನೀಡಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಸಿಂಧಗಿ ಪುರಸಭೆ ಯೋಜನಾ ಪ್ರಾಧಿಕಾರವು ಸಿಂಧಗಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪರಿಷ್ಕೃತ – 1) ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆ (ಪರಿಷ್ಕೃತ – 1) ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ಸಿಂಧಗಿ ಪಟ್ಟಣದ ಜನಸಂಖ್ಯೆಯ 2021ರಲ್ಲಿ 65000ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಗೆ (ಪರಿಷ್ಕೃತ – 1)ಯನ್ನು ತಯಾರಿಸಲಾಗಿದೆ. ಸಿಂಧಗಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 825.0 ಹೆಕ್ಟೇರ್ ಪ್ರದೇಶದಲ್ಲಿ 660 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯಿಂದ ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 660. ಹೆ. ಪ್ರದೇಶದಲ್ಲಿ ವಸತಿಗಾಗಿ 343.53 ಹೆ.(ಶೇ.53.50), ವಾಣಿಜ್ಯಕ್ಕಾಗಿ 26.75 ಹೆ. (ಶೇ.4.17), ಕೈಗಾರಿಕೆಗಾಗಿ 04.37 ಹೆ .(ಶೇ.0.68), ಸಾರ್ವಜನಿಕ : ಅರೆ ಸಾರ್ವಜನಿಕ ಉಪಯೋಗಕ್ಕಾಗಿ 69.50ಹೆ .(ಶೇ.10.83), ಉದ್ಯಾನವನ : ಬಯಲು ಜಾಗಗಳಿಗೆ 48.90 ಹೆ .(ಶೇ.7.62), ಹಾಗೂ ಸಾರಿಗೆ : ಸಂಪರ್ಕ ವಲಯಕ್ಕಾಗಿ 148.95 ಹೆ. (ಶೇ.23.20)

ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ 1) ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಸಲಾಗಿದೆ

**ಸರ್ಕಾರದ ಆದೇಶ ಸಂಖ್ಯೆ. ನಅಇ 21 ಬೆಮಪ್ರಾ 2008 , ಬೆಂಗಳೂರು, ದಿನಾಂಕ: 13.02.2008**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ವಿಜಾಪುರ ಜಿಲ್ಲೆ, ಸಿಂಧಗಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆಗೆ (ಪರಿಷ್ಕೃತ-1) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 13(3)ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆಗೆ ಅಂತಿಮ ಅನುಮೋದನೆಯನ್ನು ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಭಾರತ ರಾಷ್ಟ್ರಾಧ್ಯಕ್ಷರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಟಿ.ನಾರಾಯಣಸ್ವಾಮಿ),
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧) ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
೨) ಮುಖ್ಯಾಧಿಕಾರಿಗಳು, ಸಿಂಧಗಿ ಪುರಸಭಾ ಯೋಜನಾ ಪ್ರಾಧಿಕಾರ, ಸಿಂಧಗಿ.
೩) ನಗರ ಯೋಜನಾ ಸಹಾಯಕ ನಿರ್ದೇಶಕರು, ಬಿಜಾಪುರ ನಗರ ಯೋಜನಾ ಇಲಾಖೆ, ಬಿಜಾಪುರ.
೪) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು